# ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.

ಸಂಖ್ಯೆ: ಸಿ1/ಎಸ್‌ಎಸ್‌ಎಲ್‌ಸಿ/ಜೂನ್-2021/ಪ.ವೇ.ಪ/26/20-21 ದಿನಾಂಕ: 13.05.2021

## ಸುತ್ತೋಲೆ

ವಿಷಯ: ಕೋವಿಡ್-19ರ ಹಿನ್ನೆಲೆಯಲ್ಲಿ 2020-21ನೇ ಸಾಲಿನ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯನ್ನು ಮುಂದೂಡುವ ಕುರಿತು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ1/ಎಸ್‌ಎಸ್‌ಎಲ್‌ಸಿ/ಜೂನ್-2021/ಪ.ವೇ.ಪ/26/20-21, ದಿನಾಂಕ:01.03.2021.

2. ದಿನಾಂಕ: 12.05.2021 & 13.05.2021ರಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆ.

*******

ರಾಜ್ಯದಾದ್ಯಂತ ಕೋವಿಡ್-19ರ ಪ್ರಕರಣಗಳು ನಿರಂತರವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ನಡೆಸುವ ಸಂಬಂಧ ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಪರೀಕ್ಷೆಗಳು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಇವರ ಉಪಸ್ಥಿತಿಯಲ್ಲಿ ಉಲ್ಲೇಖ-2ರನ್ವಯ ನಡೆದ ಸಭೆಯಲ್ಲಿ ಇಂದಿನ ಕೋವಿಡ್ ಪರಿಸ್ಥಿತಿಯಲ್ಲಿ ವಿದ್ಯಾರ್ಥಿಗಳ ಕ್ಷೇಮ ಮುಖ್ಯವಾಗಿದ್ದು, ಪರೀಕ್ಷೆಗಳನ್ನು ನಡೆಸುವುದು ವಿದ್ಯಾರ್ಥಿಗಳ ಆರೋಗ್ಯಕ್ಕೆ ಸೂಕ್ತವಲ್ಲವೆಂದು ಅಭಿಪ್ರಾಯಿಸಲಾಯಿತು ಹಾಗೂ ಪರೀಕ್ಷೆಯನ್ನು ಮುಂದೂಡುವಂತೆ ವಿದ್ಯಾರ್ಥಿಗಳು, ಪೋಷಕರು ಹಾಗೂ ಹಲವಾರು ಸಂಘ ಸಂಸ್ಥೆಗಳಿಂದ ಮನವಿಗಳು ಸ್ವೀಕೃತವಾಗಿರುತ್ತವೆ.

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಹಿತದೃಷ್ಟಿಯಿಂದ ಮಂಡಳಿ ವತಿಯಿಂದ ದಿನಾಂಕ:21.06.2021 ರಿಂದ 05.07.2021ರವರೆಗೆ ನಡೆಸಬೇಕಿದ್ದ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಮುಂದೂಡಿದೆ. ಪರಿಷ್ಕೃತ ಪರೀಕ್ಷಾ ವೇಳಾಪಟ್ಟಿಯನ್ನು ಪರೀಕ್ಷೆಯನ್ನು ನಡೆಸಲು ನಿಗಧಿಪಡಿಸುವ ದಿನಾಂಕಕ್ಕೆ 20 ದಿನಗಳ ಮುಂಚಿತವಾಗಿ ಪ್ರಕಟಿಸಲಾಗುವುದು ಹಾಗೂ ಪರೀಕ್ಷಾ ವಿಷಯಕ್ಕೆ ಸಂಬಂಧಿಸಿದಂತೆ ಏನಾದರೂ ಮಾಹಿತಿಗಳಿದ್ದಲ್ಲಿ ಇಲಾಖೆಯಿಂದ ಕಾಲಕಾಲಕ್ಕೆ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು.

ಎಲ್ಲಾ ವಿದ್ಯಾರ್ಥಿಗಳು ತಮ್ಮ ಮನೆಯಲ್ಲಿಯೇ ಸುರಕ್ಷಿತವಾಗಿದ್ದು, ಪರೀಕ್ಷೆಗಳಿಗೆ ಉತ್ತಮ ಸಿದ್ಧತೆಗಳನ್ನು ಮಾಡಿಕೊಳ್ಳುವುದು ಹಾಗೂ ಯಾವುದೇ ಆತಂಕ ಅಥವಾ ಖಿನ್ನತೆಗೆ ಒಳಗಾಗದೇ ಧೈರ್ಯದಿಂದ ಈ ಕಠಿಣ ಪರಿಸ್ಥಿತಿಯಿಂದ ಪಾರಾಗಿ ಮುಂದಿನ ಜೀವನದ ಬಗ್ಗೆ ಯೋಜಿಸಬೇಕೆಂದು ಇಲಾಖೆಯು ಹಾರೈಸುತ್ತದೆ.

ಶಿಕ್ಷಕರು/ಮುಖ್ಯ ಶಿಕ್ಷಕರು ವಿದ್ಯಾರ್ಥಿಗಳ ಜೊತೆ ದೂರವಾಣಿ ಮತ್ತು ಇತರೆ ಜಾಲತಾಣಗಳ ಮೂಲಕ ಸತತ ಸಂಪರ್ಕದಲ್ಲಿದ್ದು, ಪರೀಕ್ಷೆಗೆ ಸಂಬಂಧಿಸಿದಂತೆ ಅಗತ್ಯ ಮಾರ್ಗದರ್ಶನ, ಸಲಹೆ ಸೂಚನೆಗಳನ್ನು ನೀಡುವುದು ಮತ್ತು ಪಠ್ಯಕ್ರಮಕ್ಕೆ ಸಂಬಂಧಿಸಿದ ಸಂದೇಹ/ಸಂಶಯಗಳನ್ನು ಪರಿಹರಿಸುವುದು.

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

(ಡಿ. ಸುಮಂಗಲ) 13/5/21
ನಿರ್ದೇಶಕರು, ಪರೀಕ್ಷೆಗಳು

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಂದಿನ ಅಗತ್ಯ ಕ್ರಮಕ್ಕಾಗಿ ರವಾನಿಸುತ್ತಾ ಸುತ್ತೋಲೆ ಪ್ರತಿಯನ್ನು ತಮ್ಮ ವ್ಯಾಪ್ತಿಯ ಎಲ್ಲಾ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಕಳುಹಿಸಲು ಸೂಚಿಸಿದೆ.
3. ಕಛೇರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.**

1. ಆಪ್ತ ಕಾರ್ಯದರ್ಶಿಗಳು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನಸೌಧ, ಬೆಂಗಳೂರು-560001.
2. ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು, ಕೊಠಡಿ ಸಂಖ್ಯೆ: 262, 2ನೇ ಮಹಡಿ, ವಿಧಾನಸೌಧ, ಬೆಂಗಳೂರು-560001.
3.

3. ಆಪ್ತ ಕಾರ್ಯದರ್ಶಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560001.
4. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.